ಅಭಿವೃದ್ಧಿ ನಿಗಮ ಸ್ಥಾಪನೆ

ಬೆಂಗಳೂರು: ಅತ್ಯಂತ ಹಿಂದುಳಿದ ವರ್ಗಗಳಾಗಿರುವ ಪಿಂಜಾರ, ನದಾಫ್, ಚಪ್ಪರ ಬಂದ್, ಒಟಾರಿ ಸೇರಿದಂತೆ ಇತರ 13 ಜಾತಿಗಳ ಸರ್ವತೋಮುಖ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡಿದೆ.ಹಿಂದುಳಿದ ವರ್ಗಗಳ ಪ್ರವರ್ಗ 1 ರ ಪಿಂಜಾರ, ನದಾಫ್ ಹಾಗೂ ಇತರ 13 ಜಾತಿಗಳ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಿ, ಆದೇಶ ಹೊರಡಿಸಲಾಗಿದೆ. ಸಂಪುಟ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದ್ದು ಸಿಎಂ ಬಸವರಾಜ್ ಬೊಮ್ಮಾಯಿ ಈ ವಿಚಾರವನ್ನು ಟ್ವೀಟ್ ಮೂಲಕ ಹಂಚಿಕೊಂಡಿದ್ದಾರೆ.

ಹೋರಾಟಗಾರರ ಮೇಲಿನ ಕೇಸುಗಳು ವಾಪಸ್

ಕರವೇ ಬೆಳ್ಳಿಹಬ್ಬ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಭರವಸೆ

ಬೆಂಗಳೂರು: ಕನ್ನಡ ಪರ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಸರ್ಕಾರ ಸಂಪೂರ್ಣ ಹಿಂಪಡೆಯಲಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಅರಮನೆ ಮೈದಾನದ ಗಾಯತ್ರಿ ವಿಹಾರನಲ್ಲಿ ಶುಕ್ರವಾರ ಕರ್ನಾಟಕ ರಕ್ಷಣಾ ವೇದಿಕೆ ಹಮ್ಮಿಕೊಂಡಿದ್ದ ಬೆಳ್ಳಿಹಬ್ಬ ಕಾರ್ಯಕ್ರಮದಲ್ಲಿ ಮಾತನಾಡಿದರು. ನಾನು ಈ ಹಿಂದೆ ಗೃಹಸಚಿವನಾಗಿದ್ದಾಗ ಕನ್ನಡಪರ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂಪಡೆದಿದ್ದೆ. ಆದರಲ್ಲಿ ಇನ್ನೂ ಕೆಲವು ಪ್ರಕರಣಗಳು ಉಳಿದಿವೆ. ನಾರಾಯಣ ಗೌಡರು ಈ ಬಗ್ಗೆ ಪಟ್ಟಿಕೊಟ್ಟರೆ ಸಂಪೂರ್ಣವಾಗಿ ಕನ್ನಡಪರ ಹೋರಾಟಗಾರರ ಮೇಲಿನ ಪ್ರಕರಣಗಳನ್ನು ಹಿಂಪಡೆಯುವುದಾಗಿ ಭರವಸೆ ನೀಡಿದರು.

ಖಾಸಗಿ ಕ್ಷೇತ್ರದಲ್ಲಿ ಶೇ.80 ಕನ್ನಡಿಗರಿಗೆ ಉದ್ಯೋಗ ನೀಡಬೇಕು ಎಂಬ ಕಾಯಿದೆ ಜಾರಿಗೆ ತರಲಾಗಿದೆ. ಈ ಹಿಂದೆ 'ಡಿ' ಹುದ್ದೆಮಾತ್ರ ಎಂದು ಇತ್ತು. ಅದನ್ನು ಈಗ ಎಬಿಸಿಡಿ ಕೆಟಗರಿಯಲ್ಲಿ ಕೂಡ ನೀಡಬೇಕು ಎಂದು ಆದೇಶ ಮಾಡಲಾಗಿದೆ. ಈಗಿರುವ ಸರ್ಕಾರ ಕನ್ನಡಿಗರ ಸರ್ಕಾರ, ಕನ್ನಡಿಗರಿಗೋಸ್ಕರ ಇರುವ ಸರ್ಕಾರವಾಗಿದೆ ಎಂದರು.

ಗಡಿ ವಿಚಾರದಲ್ಲಿ ಗಟ್ಟಿ ಧ್ವನಿ: ಕನ್ನಡದ ವಿಚಾರದಲ್ಲಿ ಸರ್ಕಾರ ಯಾವತ್ತೂ ರಾಜೀ ಮಾಡಿಕೊಂಡಿಲ್ಲ. ಗಡಿ ವಿಚಾರದಲ್ಲಿ ಕ್ಯಾತೆ ತೆಗೆದಾಗ ಗಟ್ಟಿಯಾಗಿ ಮೊದಲು ಮಾತನಾಡಿದ್ದೇ ನಾನು. ಅವತ್ತು ಮಹಾರಾಷ್ಟ್ರ ಬೆಳಗಾವಿ ಗಡಿ ವಿಚಾರದಲ್ಲಿ ಕ್ಯಾತೆ ತೆಗೆದಿತ್ತು. ಆಗ ಮೊದಲು ನಿಮ್ಮದನ್ನು ನೋಡಿಕೊಳ್ಳಿ ಎಂದು ಹೇಳಿದ್ದೆ. ನಿಮ್ಮ ಗಡಿ ಭಾಗದಲ್ಲಿರುವವರಿಗೆ ನೀರು ಕೊಡಲು ಸಾಧ್ಯವಾಗಿಲ್ಲ. ನಿರ್ಣಯ ತೆಗೆದುಕೊಂಡಿದ್ದಾರೆ. ಹಾಗಾಗಿ ನಿಮ್ಮದನ್ನು ಮೊದಲು ನೋಡಿಕೊಳ್ಳಿ ಎಂದು ಎಚ್ಚರಿಕೆ ನೀಡಿದ್ದೆ ಎಂದರು.

ಅರಮನೆ ಮೈದಾನದ ಗಾಯತ್ರಿ ವಿಹಾರನಲ್ಲಿ ಕರವೇ ಹಮ್ಮಿಕೊಂಡಿದ್ದ ಬೆಳ್ಳಿ ಹಬ್ಬದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪುಸ್ತಕಗಳನ್ನು ಬಿಡುಗಡೆ ಮಾಡಿದರು. ಕರವೇ ರಾಜ್ಯಾಧ್ಯಕ್ಷ ನಾರಾಯಣ ಗೌಡ ಇತರರು ಹಾಜರಿದ್ದರು.

ಸರ್ಕಾರ ರಚಿಸಲು ಅವಕಾಶ ನೀಡಿದರೆ ಕೇಸ್ ವಾಪಸ್: ಡಿ.ಕೆ.ಶಿವಕುಮಾರ್

ಬೆಂಗಳೂರು: ಈ ಬಾರಿ ಸರ್ಕಾರ ರಚನೆಗೆ ಕಾಂಗ್ರೆಸ್ ಪಕ್ಷಕ್ಕೆ ಅವಕಾಶ ಕೊಟ್ಟರೆ ಕನ್ನಡಪರ ಹೋರಾಟಗಾರರ ಪ್ರಕರಣಗಳನ್ನು ಹಿಂಪಡೆಯುವುದಾಗಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದರು. ಕರ್ನಾಟಕ ರಕ್ಷಣಾ ವೇದಿಕೆ ಹಮ್ಮಿಕೊಂಡಿದ್ದ ಬೆಳ್ಳಿಹಬ್ಬ ಕಾರ್ಯಕ್ರಮದ ಸಮಾರೋಪದಲ್ಲಿ ಮಾತನಾಡಿದರು. ಏನೂ ಇಲ್ಲದೆ ರಾಜಕೀಯ ದುರುದ್ದೇಶದಿಂದ ನಾನು ಕೇಸ್ ಹಾಕಿಸಿಕೊಂಡಿದ್ದೇನೆ. ಜಜ್ಜಿ ಜಜ್ಜಿ ಹಿಪ್ಪೆ ಆಗಿ ಹೋಗಿದ್ದೇನೆ. ನೀವು ಕೂಡ ಕನ್ನಡ, ಕನ್ನಡ ಎಂದು ಹೋರಾಟ ಮಾಡಿ ಕೇಸ್ ಮೇಲೆ ಕೇಸ್ ಹಾಕಿಸಿಕೊಂಡಿದ್ದೀರಿ. ನಮಗೆ ಸರ್ಕಾರ ರಚನೆ ಮಾಡಲು ಒಂದು ಅವಕಾಶ ನೀಡಿ. ಸರ್ಕಾರ ರಚನೆ ಮಾಡಿದ ತಕ್ಷಣದಲ್ಲೇ ನಿಮ್ಮೆಲ್ಲ ಕೇಸ್‌ಗಳನ್ನು ಹಿಂಪಡೆಯುತ್ತೇವೆ ಎಂದರು. ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಮಾತನಾಡಿದರು. ಕಸಾಪ ಅಧ್ಯಕ್ಷ ಮಹೇಶ ಜೋಶಿ, ಸಾಹಿತಿ ಹಂಪನಾಗರಾಜಯ್ಯ, ಡಾ.ತೋಂಟದ ಸಿದ್ಧರಾಮ ಮಹಾಸ್ವಾಮೀಜಿ ಇತರರಿದ್ದರು.

ಬೆಳಗಾವಿಯಲ್ಲಿ ಸಂಗೊಳ್ಳಿ ರಾಯಣ್ಣ ಮೂರ್ತಿ ವಿಚಾರದಲ್ಲಿ ರಾಜೀ ಆಗಿಲ್ಲ. ಜತೆಗೆ ಬೆಳಗಾವಿಯ ಸುವರ್ಣ ಸೌಧದ ಎದುರು ಕಿತ್ತೂರು ರಾಣಿ ಚೆನ್ನಮ್ಮ ಮತ್ತು ಸಂಗೊಳ್ಳಿ ರಾಯಣ್ಣನ ಪ್ರತಿಮೆ ಸ್ಥಾಪನೆ ಮಾಡುವ ತೀರ್ಮಾನ ಕೈಗೊಂಡೆ. ಆ ಕೆಲಸ ಪೂರ್ಣಗೊಂಡಿದೆ.

ಬೆಳಗಾವಿಯಲ್ಲಿ ಕನ್ನಡದ ಪ್ರಥಮ ಮೇಯರ್: ಬೆಳಗಾವಿ ಮಹಾನಗರ ಪಾಲಿಕೆಗೆ ಪ್ರಥಮ ಕನ್ನಡ ಮೇಯರ್ ಮಾಡುವಲ್ಲಿ ನಾರಾಯಣಗೌಡರ ಪಾತ್ರ ದೊಡ್ಡದಿದೆ. ನಾನು ಕೂಡ ಇದರಲ್ಲಿ ಸೇರಿಕೊಂಡಿದ್ದೆ. ಆಗ ಕನ್ನಡಪರ ಹೋರಾಟದಲ್ಲಿ ಭಾಗವಹಿಸುತ್ತಿದ್ದೆ ಎಂದರು.

ಸಚಿವ ಡಾ.ಸುಧಾಕರ್ ಮಾತನಾಡಿ, ಕನ್ನಡ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕರವೇ ಪ್ರಾಮಾಣಿಕ ಸೇವೆ ಮಾಡುತ್ತಿದೆ. ಕನ್ನಡ ನಾಡು ನುಡಿ ವಿಚಾರದಲ್ಲಿ ಕೇವಲ ಕನ್ನಡಪರ ಸಂಘಟನೆಗಳು ಹೋರಾಟ ಮಾಡಿದರೆ ಸಾಲದು. ನಮ್ಮ ಜವಾಬ್ದಾರಿಯನ್ನು ನಾವು ಅರಿತುಕೊಂಡು ಕರ್ನಾಟಕ ಸಮಗ್ರ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದರು.

ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಕೆಲವು ಸಲ ನಮ್ಮ ದೇಹವನ್ನು ಎಷ್ಟೇ ಚೆನ್ನಾಗಿ ನೋಡಿಕೊಂಡರು ನಾನಾ ಕಾರಣಗಳಿಂದಾಗಿ ದೇಹದಲ್ಲಿ ಆರೋಗ್ಯ ವ್ಯತ್ಯಾಸವಾಗುತ್ತದೆ. ಅದೇ ರೀತಿಯಲ್ಲಿ ಸಂಘಟನೆ ನಡೆಸುವವರು ಎಷ್ಟೇ ಸೂಕ್ಷ್ಮವಾಗಿ ನಡೆಸಿದರೂ ಭಿನ್ನಮತ ಬರುತ್ತವೆ. ಆ ಎಲ್ಲ ಸಂದರ್ಭಗಳನ್ನು ದಾಟಿ ಕನ್ನಡ ರಕ್ಷಣಾ ವೇದಿಕೆ ಬಂದಿದೆ ಎಂದರು.

ಇದೇ ವೇಳೆ ಹಿರಿಯ ನಟ ಮತ್ತು ನಿರ್ಮಾಪಕ, ದ್ವಾರಕೀಶ್, ಹಿರಿಯ ರಾಜಕಾರಣಿ ಪಿ.ಜಿ.ಆರ್. ಸಿಂಧ್ಯಾ, ಯಕ್ಷಗಾನ ಭಾಗವತ ಸುಬ್ರಹ್ಮಣ್ಯಧಾರೇಶ್ವರ, ವಿಮರ್ಶಕ ಡಾ.ಬೈರಮಂಗಲ ರಾಮೇಗೌಡ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗೌರವಿಸಲಾಯಿತು. ಸಿದ್ದಗಂಗಾ ಮಠದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ, ಮಾದಾರ ಚನ್ನಯ್ಯ ಪೀಠದ ಬಸವಮೂರ್ತಿ ಮಾದಾರ ಚಮ್ಮಯ್ಯ ಸ್ವಾಮೀಜಿ, ಕರವೇ ರಾಜ್ಯಾಧ್ಯಕ್ಷ ನಾರಾಯಣ ಗೌಡ , ಹಿರಿಯ ಸಾಹಿತಿ ಚಂದ್ರಶೇಖರ ಕಂಬಾರ ಇತರರಿದ್ದರು.

ಸಣ್ಣ ಪ್ರಯತ್ನಗಳಿಂದ ಹೆಚ್ಚಿನ ಸಾಧನೆ ಸಾಧ್ಯ

ಬೆಂಗಳೂರು: ನಿರಂತವಾದ ಸಣ್ಣ ಸಣ್ಣ ಪ್ರಯತ್ನಗಳಿಂದ ಮಹಿಳೆಯರು ದೊಡ್ಡ ಸಾಧನೆಯನ್ನು ಮಾಡಲು ಸಾಧ್ಯ ಎಂದು ಪದ್ಮಶ್ರೀ ಸಾಲುಮರದ ತಿಮ್ಮಕ್ಕ ಅಭಿಪ್ರಾಯಪಟ್ಟರು.

ಕರ್ನಾಟಕ ಅಭಿವೃದ್ಧಿ ನಿಗಮದಿಂದ ನಗರದಲ್ಲಿ ಆಯೋಜಿಸಲಾಗಿದ್ದ 'ಮಹಿಳಾ ದಿನಾಚರಣೆ'ಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲೂ ಅತ್ಯುತ್ತಮ ಸಾಧನೆ ಮಾಡುತ್ತಿದ್ದಾರೆ. ಒಮ್ಮೆಲೆ ದೊಡ್ಡದಕ್ಕೆ ಗುರಿಯಿಡುವುದಕ್ಕಿಂತ ಸಣ್ಣ ಸಣ್ಣ ಪ್ರಯತ್ನಗಳು ಹೆಚ್ಚಿನ ಫಲ ನೀಡುತ್ತವೆ. ನಷ್ಟದಲ್ಲಿದ್ದ ಅರಣ್ಯ ಅಭಿವೃದ್ಧಿ ನಿಗಮವನ್ನು ಲಾಭದತ್ತ ಮಾಡುವಲ್ಲಿ ಅಧ್ಯಕ್ಷೆ ತಾರಾ ಅನೂರಾಧ ಹಾಗೂ ವ್ಯವಸ್ಥಾಪಕ ನಿರ್ದೇಶಕಿ ರಾಧಾ ದೇವಿ ಅವರು ಯಶಸ್ವಿಯಾಗಿದ್ದಾರೆ ಎಂದು ಶ್ಲಾಘಿಸಿದರು. ನಿಗಮದ ವಿವಿಧ ವಿಭಾಗಗಳಲ್ಲಿ ಸಾಧನೆಗೈದ ಮಹಿಳೆಯರಿಗೆ ಸನ್ಮಾನ ಮಾಡಿ ಗೌರವಿಸಲಾಯಿತು.

ವಿಶ್ವಕರ್ಮ ಸಮುದಾಯ ರಾಜಕೀಯ ಬೆಳವಣಿಗೆಗೆ ಸಕಾಲ

ಬೆಂಗಳೂರು: ರಾಜಕೀಯವಾಗಿ ಉನ್ನತ ಸ್ಥಾನಕ್ಕೇರಲು ವಿಶ್ವಕರ್ಮ ಸಮುದಾಯಕ್ಕೆ ಇದು ಸೂಕ್ತ ಕಾಲ ಎಂದು ಜ್ಞಾನಪೀಠ ಪುರಸ್ಕೃತ ಸಾಹಿತಿ ಡಾ.ಚಂದ್ರಶೇಖರ ಕಂಬಾರ ಹೇಳಿದರು. ನಾಯಂಡಹಳ್ಳಿ ಬಳಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಸಮಾಜದ ಬೃಹತ್ ಜನ ಜಾಗೃತಿ ಸಮಾವೇಶದಲ್ಲಿ ಮಾತನಾಡಿದರು. ಸಮುದಾಯದವರೆಲ್ಲರೂ ಒಟ್ಟಾಗಿ ಒಂದೇ ವೇದಿಕೆಯಲ್ಲಿ ಸೇರಿರುವುದು ಈ ಸಮುದಾಯದ ಅಭಿವೃದ್ಧಿ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಎಂದರು. ವಿಧಾನಪರಿಷತ್ ಸದಸ್ಯ ಟಿ.ಎ.ಶರವಣ ಮಾತನಾಡಿ, ಮತ್ತೊಮ್ಮೆ ಕುಮಾರ ಸ್ವಾಮಿ ಅವರು ಅಧಿಕಾರಕ್ಕೆ ಬಂದರೆ ಈ ಸಮುದಾಯದ ಬೇಡಿಕೆಗಳು ಈಡೇರಲಿವೆ ಎಂದರು. ವಿಶ್ವಕರ್ಮ ಸೇವಾಪ್ರತಿಷ್ಠಾನ ಉಪಾಧ್ಯಕ್ಷ ಡಾ. ಬಿಎಂ ಉಮೇಶ್ ಕುಮಾರ್ ಇತರರಿದ್ದರು.

ಮಹೇಶ್ ಜೋಶಿ ಸರ್ವಾಧಿಕಾರಿ ಧೋರಣೆ ಖಂಡಿಸಿ ಸಭೆ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾಗಿರುವ ಮಹೇಶ್ ಜೋಷಿ ತಮ್ಮ ನಡವಳಿಕೆಯನ್ನು ತಿದ್ದಿಕೊಳ್ಳದಿದ್ದರೆ ಖ್ಯಾತ ಚಿಂತಕರಾದ ಬರಗೂರು ರಾಮಚಂದ್ರಪ್ಪ ಎಸ್. ಜಿ. ಸಿದ್ದರಾಮಯ್ಯ, ಕೆ. ಮರುಳಸಿದ್ದ ಮುಂತಾದವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಕನ್ನಡ ಜನಶಕ್ತಿ ಕೇಂದ್ರದ ಅಧ್ಯಕ್ಷ ಸಿ. ಕೆ. ರಾಮೇಗೌಡ ಹೇಳಿದ್ದಾರೆ. ಕಸಾಪ ಅಧ್ಯಕ್ಷ ಮಹೇಶ್ ಜೋಶಿ ಸರ್ವಾಧಿಕಾರಿ ಧೋರಣೆಯನ್ನು ಖಂಡಿಸಿ ಖಾಸಗಿ ಹೋಟೆಲ್ ಒಂದರಲ್ಲಿ ಕರೆಯಲಾಗಿದ್ದ ಸಮಾನ ಮನಸ್ಕರ ವೇದಿಕೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಸಾಪದ ಸಭೆ, ಸಮಾರಂಭ, ಸಮ್ಮೇಳನಗಳಲ್ಲಿ ಕನ್ನಡದ ಹಿರಿಯ ಸಾಹಿತಿ, ಬರಹಗಾರರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂದು ಅವರು ಆಗ್ರಹಿಸಿದ್ದಾರೆ. ಕಸಾಪದಲ್ಲಿ ಕೃಷ್ಣರಾಜ ಪರಿಷನ್ಮಂದಿರ ಸಭಾ ಭವನಕ್ಕೆ ವಿಧಿಸಲಾಗುತ್ತಿದ್ದ ಶುಲ್ಕವನ್ನು ದುಪ್ಪಟ್ಟು ಏರಿಸಲಾಗಿದೆ. ಅದರ ಜತೆಗೆ ಜಿಎಸ್‌ಟಿ ಪಾವತಿಸಬೇಕಿದೆ. ತಕ್ಷಣವೇ ಈ ನಿರ್ಧಾರವನ್ನು ವಾಪಾಸ್ ಪಡೆಯಬೇಕು, ಕುವೆಂಪು ಸಭಾಂಗಣವನ್ನು ಮತ್ತತೆರೆಯಬೇಕು ಎಂದರು. ಸಾಹಿತಿ ವಸುಂಧರಾ ಭೂಪತಿ, ಲೇಖಕಿಯರ ಸಂಘದ ಅಧ್ಯಕ್ಷೆ ಎಚ್. ಎಲ್. ಪುಷ್ಪ ಮಾತನಾಡಿದರು.

ಶೇ.40 ಟಿಬಿ ತಗ್ಗಿಸಿದ್ದಕ್ಕೆ ರಾಜ್ಯಕ್ಕೆ ಬೆಳ್ಳಿ ಪದಕ

ಬೆಂಗಳೂರು: ಕರ್ನಾಟಕ ರಾಜ್ಯ ಕ್ಷಯರೋಗ ವಿಭಾಗವು ತನ್ನ ವಾರ್ಷಿಕ ಸಾಧನೆಗಾಗಿ ವಾರಾಣಸಿಯಲ್ಲಿ ನಡೆದ ವಿಶ್ವ ಟಿಬಿ ಶೃಂಗಸಭೆಯಲ್ಲಿ 7 ಪ್ರಶಸ್ತಿಗಳನ್ನು ಬಾಚಿಕೊಂಡಿದೆ. ಟಿಬಿ ಪ್ರಕರಣ ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಬಹಳ ಉತ್ತಮ ಕಾರ್ಯ ನಿರ್ವಹಿಸಿರುವ ಕಾರಣಕ್ಕೆ ವಾರಾಣಸಿಯಲ್ಲಿ ನಡೆದ ವಿಶ್ವ ಟಿಬಿ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಿದರು. ರಾಜ್ಯ ಸರ್ಕಾರದ ಪರವಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಟಿ.ಕೆ ಅನಿಲ್ ಕುಮಾರ್ ಪ್ರಶಸ್ತಿ ಸ್ವೀಕರಿಸಿದರು.

ತುಮಕೂರು ಜಿಲ್ಲೆ ಟಿಬಿ ಪ್ರಕರಣಗಳಲ್ಲಿ ಶೇ. 40 ಇಳಿಕೆ ಮಾಡಿದ ಹಿನ್ನೆಲೆಯಲ್ಲಿ ಬೆಳ್ಳಿ ಪದಕ ಗಳಿಸುವಲ್ಲಿ ಯಶಸ್ವಿಯಾಗಿದ್ದರೆ. ಕೊಡಗು, ಚಿತ್ರದುರ್ಗ, ಬೀದರ್, ಹಾಸನ, ಚಿಕ್ಕಮಗಳೂರು, ರಾಮನಗರ ಜಿಲ್ಲೆಗಳಲ್ಲಿ ಶೇ.20 ಕ್ಷಯ ರೋಗ ತಗಿದ್ದು, ಈ ಜಿಲ್ಲೆಗಳು ಕಂಚಿನ ಪದಕ ಪಡೆದುಕೊಂಡಿವೆ. ಕರ್ನಾಟಕ ರಾಜ್ಯ ಕ್ಷಯರೋಗ ವಿಭಾಗವು ತನ್ನ ವಾರ್ಷಿಕ ಸಾಧನೆಗಾಗಿ 7 ಪ್ರಶಸ್ತಿಗಳನ್ನು ಬಾಚಿಕೊಂಡಿವೆ.

ದಾಸರಹಳ್ಳಿ ಮಲಯಾಳಂ ಸಮಾಜದಿಂದ ನಡೆದ ಕುಟುಂಬ ಸಂಗಮಂ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಮುನಿರಾಜು ಅವರನ್ನು ಅಭಿನಂದಿಸಲಾಯಿತು. ಕೇರಳ ರಾಜ್ಯದ ಬಿಜೆಪಿ ಅಧ್ಯಕ್ಷ ಸುರೇಂದ್ರ ಕುಮಾರ, ಬೆಂಗಳೂರು ನಗರ ಜಿಪಂ ಮಾಜಿ ಅಧ್ಯಕ್ಷ ಜಿ.ಮರಿಸ್ವಾಮಿ, ನಗರ ಪ್ರಭಾರಿ ಕಿರಣ್ ಬಾಬು ಇತರರು ಹಾಜರಿದ್ದರು.



ಚಂದ್ರಾಪುರ ಬಳಿಯ ಮಂಗಮ್ಮನಪಾಳ್ಯದ ಹಿರಿಯ ಬಿಜೆಪಿ ಮುಖಂಡ ಆಂಜನೇಯ ಗೌಡ ನೇತೃತ್ವದಲ್ಲಿ ಮಂಗಮ್ಮನಪಾಳ್ಯದ ಕಾಂಗ್ರೆಸ್‌ನ ಕಾರ್ಯಕರ್ತರು ಶಾಸಕ ಸತೀಶ್ ರೆಡ್ಡಿ ಸಮ್ಮುಖದಲ್ಲಿ ಬಿಜೆಪಿಗೆ ಸೇರ್ಪಡೆಯಾದರು.

ಇಂದಿನ ಆಮಂತ್ರಣ

■**ಕನ್ನಡ ಮತ್ತು ಸಂಸ್ಕೃತಿ ಇಲಾಖೆ:** 'ನಮ್ಮ ಬೆಂಗಳೂರು ಹಬ್ಬ'ದ ಪ್ರಯುಕ್ತ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಮೇಳಗಳ ಉದ್ಘಾಟನಾ ಸಮಾರಂಭ. ಮುಖ್ಯ ಅತಿಥಿಗಳು: ಕಂದಾಯ ಸಚಿವ ಆರ್.ಅಶೋಕ್, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಡಾ.ಚಂದ್ರಶೇಖರ ಕಂಬಾರ. ಸ್ಥಳ: ಕಿಂಗ್ ಎಡ್ವರ್ಡ್ ಪ್ರತಿಮೆ ಬಳಿ, ಕಬ್ಬನ್ ಪಾರ್ಕ್. ಬೆಳಗ್ಗೆ 9.30ಕ್ಕೆ.

■**ಎಸ್‌ಜೆಇಸಿಟಿ ಅಕಾಡೆಮಿ ಮಹಾಲಕ್ಷ್ಮೀ ಬಡಾವಣೆ:** 4ನೇ ಟ್ರಸ್ಟಿನ ವಾರ್ಷಿಕೋತ್ಸವ ಹಾಗೂ ಉಚಿತ ವೈದ್ಯಕೀಯ ತಪಾಸಣೆ-ಕೌನ್ಸಿಲಿಂಗ್ ಮತ್ತು ರಕ್ತದಾನ ಶಿಬಿರ. ಮುಖ್ಯ ಅತಿಥಿಗಳು: ಅಬಕಾರಿ ಸಚಿವ ಗೋಪಾಲಯ್ಯ, ಟ್ರಸ್ಟಿನ ಸಂಸ್ಥಾಪಕ ಅಧ್ಯಕ್ಷ ಆರ್. ನಾಗರಾಜಶೆಟ್ಟಿ. ಸ್ಥಳ: ಯೋಗ ಕೇಂದ್ರ, 15ನೇ ಮುಖ್ಯರಸ್ತೆ, 4ನೇ ಬ್ಲಾಕ್, ನಂದಿನಿ ಬಡಾವಣೆ. ಬೆಳಗ್ಗೆ 9.30ರಿಂದ

■ **ರಾಮಸೇವಾ ಮಂಡಲಿ ಟ್ರಸ್ಟ್:** ಯುಗಾದಿ ಸಂಗೀತ ಹಬ್ಬ ಹಾಗೂ ರಾಷ್ಟ್ರೀಯ ಪ್ರಶಸ್ತಿ ಪ್ರದಾನ. ಮುಖ್ಯ ಅತಿಥಿಗಳು: ಎಸ್-ವ್ಯಾಸ್ ವಿವಿಯ ಕುಲಪತಿ ಪದ್ಮಶ್ರೀ ಡಾ. ಎಚ್.ಆರ್.ನಾಗೇಂದ್ರ, ಇಸ್ರೋ ಮಾಜಿ ಅಧ್ಯಕ್ಷ ಡಾ. ಕೆ. ರಾಧಾಕೃಷ್ಣನ್. ಸ್ಥಳ: ಗಾಯನ ಸಮಾಜ ಸಭಾಂಗಣ, ಕೆ.ಆರ್.ರಸ್ತೆ. ಸಂಜೆ 5.15ಕ್ಕೆ.

■**ಭಾರತೀಯ ವಿದ್ಯಾಭವನ:** ಭಾರತೀಯ ವಿದ್ಯಾ ಭವನದ ಸಂಸ್ಥಾಪಕರಾದ ಕುಲಪತಿ ಡಾ.ಕೆ.ಎಂ. ಮುನ್ಷೀ ಅವರ ಪ್ರತಿಮೆಯ ಅನಾವರಣ ಮತ್ತು ಇ.ಎಸ್.ವಿ. ಸಭಾಂಗಣದ ಉದ್ಘಾಟನೆ. ಮುಖ್ಯ ಅತಿಥಿಗಳು: ರಾಜ್ಯ ಪಾಲರು ಥಾವರ್ ಚಂದ್ ಗೆಹ್ಲೋಟ್, ಭಾರತೀಯ ವಿದ್ಯಾಭವನದ ಜಂಟಿ ಕಾರ್ಯಕಾರಿ ಕಾರ್ಯದರ್ಶಿ ಜಗದೀಶ್ ಲಖಾನಿ. ಸ್ಥಳ: ಭಾರತೀಯ ವಿದ್ಯಾಭವನ, ರೇಸ್‌ಕೋರ್ಸ್ ರಸ್ತೆ. ಸಂಜೆ 6ಕ್ಕೆ.

ರಾಷ್ಟ್ರೀಯ ಕಂಪನಿ ಕಾನೂನು ಟ್ರಿಬ್ಯೂನಲ್ ಬೆಂಗಳೂರು ಪೀಠದ ಮುಂದೆ
ಕಂಪನಿ ಅರ್ಜಿ (ಸಿಎಎ) ನಂ. 12/ಬಿಬಿ/2023 ಸಿ/ಡಬ್ಲ್ಯು
ಕಂಪನಿ ಅರ್ಜಿ (ಸಿಎಎ) ನಂ. 55/ಬಿಬಿ/2022
ಕಂಪನಿಗಳ ಕಾಯಿದೆ, 2013ರ ಸೆಕ್ಷನ್‌ಗಳು 230 ರಿಂದ 232 ಮತ್ತು
ಮತ್ತು ಇತರ ಅನ್ವಯವಾಗುವ ನಿಬಂಧನೆಗಳ ವಿಷಯದಲ್ಲಿ
ಮತ್ತು
ಇವುಗಳ ನಡುವೆ ವ್ಯವಸ್ಥೆಯ ಯೋಜನೆಯ ವಿಷಯದಲ್ಲಿ
ಏವಿರಾಲ್ ಕ್ರಾಪ್ ಸೈನ್ಸ್ ಪ್ರೈವೇಟ್ ಲಿಮಿಟೆಡ್
('ಡಿಮರ್ಜ್‌ಡ್ ಕಂಪನಿ')
ಮತ್ತು
ಕ್ರಿಸ್ಟಲ್ ಕ್ರಾಪ್ ಪ್ರೊಟೆಕ್ಷನ್ ಲಿಮಿಟೆಡ್ ('ರಿಸಲ್ಟಿಂಗ್ ಕಂಪನಿ')
ಮತ್ತು
ಅವರ ಸಂಬಂಧಿತ ಷೇರುದಾರರು ಮತ್ತು ಕ್ರೆಡಿಟರ್ಸ್
ನಡುವೆ:
1. ಏವಿರಾಲ್ ಕ್